ವಿಧಾನ ಸಭೆ ಸದಸ್ಯರಾದ ಶ್ರೀ ರವೀಂದ್ರ ಎಂ.ಪಿ. (ಹರಪನಹಳ್ಳಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1189ಕ್ಕೆ ಉತ್ತರ

ಉತ್ತರಿಸಬೇಕಾದ ದಿನಾಂಕ: 01-12-2016

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1. | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ನೀಡಲಾಗುವುದು: (ವಿವರವನ್ನು ತಿಳಿಸುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣ ಹಾಗೂ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ನಂತರ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣ, ಮತ್ತು ಅಲೆಮಾರಿ/ಅರೆ ಅಲೆಮಾರಿ ಜನಾಂಗ ಕಾಲೋನಿಗಳ ಅಭಿವೃದ್ಧಿಗಾಗಿ ಸಿ.ಸಿ.ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳಿಗಾಗಿ ಅನುದಾನವನ್ನು ನೀಡಲಾಗುತ್ತಿದೆ. |
| 2. | ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಪ್ರತಿ ವಿಧಾನ ಸಭಾವಾರು ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ನೀಡಲಾಗಿದೆ: (ವಿವರ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗಾಗಿ ನೀಡಿರುವ ಅನುದಾನದ ವರ್ಷವಾರು, ವಿಧಾನ ಸಭಾ ಕ್ಷೇತ್ರವಾರು ವಿರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ. |
| 3. | ಪ್ರಸ್ತುತ ಈ ಕಾಮಗಾರಿಗಳು ಯಾವ ಹಂತದಲ್ಲಿವೆ: (ವಿವರ ನೀಡುವುದು) | ಸದರಿ ಕಾಮಗಾರಿಗಳ ಪ್ರಗತಿಯ ವಿವರಗಳನ್ನು ಸಹ ಅನುಬಂಧ-1ರಲ್ಲಿ ನೀಡಲಾಗಿದೆ. |
| 4. | ಹರಪನಹಳ್ಳಿ ವಿಧಾನ ಸಭಾ ಕ್ಷೇತ್ರಕ್ಕೆ ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು? (ವಿವರ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ಹರಪನಹಳ್ಳಿ ವಿಧಾನ ಸಭಾ ಕ್ಷೇತ್ರಕ್ಕೆ ಅಭಿವೃದ್ಧಿ ಕಾಮಗಾರಿಗಳಿಗೆ ರೂ.12.50 ಲಕ್ಷ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ. |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

D:\d drive\2016-17 LACLQ\LAQ 1189.docx